ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/11/ಸಿಸಿಟೆಕ್/2018-19

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001
ದಿನಾಂಕ:20-12-2018

## -: ಸುತ್ತೋಲೆ :-

ವಿಷಯ: ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು ಇಲ್ಲಿ " EFFECTIVE TRAINING & TEACHING " ಎಂಬ ವಿಷಯದ ಅಲ್ಪಾವಧಿ ತರಬೇತಿಯನ್ನು ಆಯೋಜಿಸುವ ಕುರಿತು.

ಉಲ್ಲೇಖ: ಪ್ರಾಚಾರ್ಯರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು ಇವರ ಪತ್ರ ಸಂಖ್ಯೆ:GWP/CCTEK/2018/216, Date:18-12-2018.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು ಇಲ್ಲಿ ಸಿಸಿಟೆಕ್ ಉಪಘಟಕದ ವತಿಯಿಂದ ವಿವಿಧ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಿಭಾಗಗಳ ಉಪನ್ಯಾಸಕರಿಗೆ ದಿ:26-12-2018 ರಿಂದ ದಿ:05-01-2019 ರವರೆಗೆ "EFFECTIVE TRAINING & TEACHING" ಎಂಬ ವಿಷಯದ ಬಗ್ಗೆ ಎರಡು ವಾರಗಳ ಅಲ್ಪಾವಧಿ ತರಬೇತಿಯನ್ನು ಆಯೋಜಿಸಲು ಅನುಮೋದನೆ ನೀಡಲಾಗಿದೆ ಹಾಗೂ ಸದರಿ ತರಬೇತಿಗೆ ಹಾಜರಾಗಲು ಇಚ್ಚಿಸುವ ಉಪನ್ಯಾಸಕರ ಹೆಸರುಗಳನ್ನು ನೊಂದಾಯಿಸಿಕೊಂಡು ಗರಿಷ್ಠ 30 ಉಪನ್ಯಾಸಕರ ಪಟ್ಟಿಗೆ ಸೀಮಿತಗೊಳಿಸಿ, ದಿನಾಂಕ:22-12-2018 ರೊಳಗಾಗಿ ಇಲಾಖೆಯಿಂದ ಅನುಮೋದನೆ ಪಡೆಯುವುದು ಕಡ್ಡಾಯಗೊಳಿಸಿದೆ.

ಸದರಿ ಅಲ್ಪಾವಧಿ ತರಬೇತಿಗೆ ಹಾಜರಾಗಲು ಇಚ್ಚಿಸುವ ಉಪನ್ಯಾಸಕರು ತಮ್ಮ ಸಂಸ್ಥೆಯ ಪ್ರಾಚಾರ್ಯರಿಂದ ಅನುಮತಿ ಪಡೆದು ಅರ್ಜಿ ಸಲ್ಲಿಸಿ ನೊಂದಾಯಿಸಿಕೊಳ್ಳುವ ಸಲುವಾಗಿ ಪ್ರಾಚಾರ್ಯರಾದ ಶ್ರೀಮತಿ ಕಮಲಾಕ್ಷಿ ಎಮ್, ಮೊಬೈಲ್ ಸಂಖ್ಯೆ: 9449818686 ಮತ್ತು ಸಿಸಿಟೆಕ್ವ್ಯವಸ್ಥಾಪಕರಾದ ಶ್ರೀ ಎಮ್. ಎ. ಬಾಗೇವಾಡಿ, ಮೊಬೈಲ್ ಸಂಖ್ಯೆ: 9880059250 / 9448075959 ಇವರನ್ನು ಸಂಪರ್ಕಿಸಲು ಸೂಚಿಸಲಾಗಿದೆ.

(Brochure ಪ್ರತಿ ಲಗತ್ತಿಸಿದೆ)

ಜಂಟಿ ನಿರ್ದೇಶಕರು(ಸಿಡಿಸಿ)

ಇವರಿಗೆ:- ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.

ಪ್ರತಿ:

1. ಪ್ರಾಚಾರ್ಯರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು ಇವರ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಇ-ಆಡಳಿತ ವಿಭಾಗ, ತಾಂ.ಶಿ.ನಿ, ಬೆಂಗಳೂರು ಇವರಿಗೆ ಡಿ.ಟಿ.ಇ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.